ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಯವರ ನ್ಯಾಯಾಲಯ, ಕುಂದಾಪುರ

ಸಿ.ಸಿ. ನಂಬ್ರ:417/2024

ಚಾಸಾ:5 ಪ್ರಾಸಾ:5

ದಿನಾಂಕ: 26.11.2025

| | | |
|---|---|---|
| ವಾಗ್ಮೂಲದವರ ಹೆಸರು | : | ಶ್ರೀ ಗಣೇಶ ಮೂರ್ತಿ |
| ತಂದೆಯ ಹೆಸರು | : | ರಾಜಾ ಭಟ್ |
| ವಯಸ್ಸು | : | 60 ವರ್ಷ |
| ಉದ್ಯೋಗ | : | ಕೃಷಿ |
| ವಾಸ ಸ್ಥಳ | : | ಗೋಪಾಡಿ |

ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

**ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ.ರವರಿಂದ:**

ಆರೋಪಿಯ ಪರಿಚಯವಿಲ್ಲ. ಸಾಕ್ಷಿಗೆ ನಿಪಿ-2 ಮತ್ತು ನಿಪಿ-3ನ್ನು ತೋರಿಸಲಾಗಿ, ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ಅದನ್ನು ನಿಪಿ-2(ಸಿ) ಮತ್ತು ನಿಪಿ-3(ಸಿ) ಎಂದು ಗುರುತಿಸಲಾಯಿತು. ಸದ್ರಿ ಸಹಿಯನ್ನು 2 ವರ್ಷಗಳ ಹಿಂದೆ ಪೊಲೀಸ್ ಠಾಣೆಯಲ್ಲಿ ಮಾಡಿರುತ್ತೇನೆ. ಅದರಲ್ಲಿ ಏನು ಬರೆದಿದೆ ಎಂದು ಗೊತ್ತಿಲ್ಲ. ಯಾವ ಕಾರಣಕ್ಕಾಗಿ ಸಹಿ ಮಾಡಿರುತ್ತೇನೆ ಎಂದು ಗೊತ್ತಿಲ್ಲ. ನನ್ನ ಸಮಕ್ಷಮದಲ್ಲಿ ಯಾವುದೇ ಸ್ವತ್ತನ್ನು ವಶಪಡಿಸಿಕೊಂಡಿಲ್ಲ. ಪೊಲೀಸರು ನನ್ನನ್ನು ವಿಚಾರಣೆ ಮಾಡಿಲ್ಲ ಮತ್ತು ನಾನು ಯಾವುದೇ ಹೇಳಿಕೆಯನ್ನು ನೀಡಿಲ್ಲ. ಸ್ಥಳದಲ್ಲಿ ಫೋಟೋ ತೆಗೆದಿರುತ್ತಾರೆ. ಸಾಕ್ಷಿ ನಿಪಿ-4ರಲ್ಲಿ ತನ್ನನ್ನು ನೋಡಿ ಗುರುತಿಸಿರುತ್ತಾರೆ. ನಿಪಿ-5 ಮತ್ತು 6ನ್ನು ನೋಡಿ ಗುರುತಿಸಿಲ್ಲ. ಸಾಕ್ಷಿ ನಿಪಿ-7 ಮತ್ತು 8 ರಲ್ಲಿರುವ ವಾಹನಗಳನ್ನು ಠಾಣೆಯಲ್ಲಿ ನೋಡಿರುವುದಾಗಿ ನುಡಿಯುತ್ತಾರೆ.

**(ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಗೆ ವಿರುದ್ದವಾಗಿ ಸಾಕ್ಷಿ ನುಡಿದಿದ್ದರಿಂದ ಮಾನ್ಯ ಸ.ಸ.ಅ.ರವರು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು.)**

**ಪಾಟೀ ಸವಾಲು: ಮಾನ್ಯ ಸ.ಸ.ಅ.ರವರಿಂದ:**

ದಿ: 02-01-2024 ರಂದು ಪೊಲೀಸರು ಕುಂಭಾಶಿ ಬಳಿ ಕರೆಯಿಸಿದ್ದರು ಎಂದರೆ ಸರಿಯಲ್ಲ. ಆಗ ನನ್ನೊಂದಿಗೆ ಚಾಸಾ-4 ಮತ್ತು 6 ರವರು ಹಾಜರು ಇದ್ದರು ಎಂದರೆ ಸರಿಯಲ್ಲ.

ರಸ್ತೆ ಪಕ್ಕದಲ್ಲಿ ಕೆಎ-20-ಎಂಡಿ-3249 ಕಾರು ಹಾಗೂ ಕೆಎ-20-ಇಎನ್-2987 ಸ್ಕೂಟರ್ ಇದ್ದು, ಕಾರು ಅಪಘಾತಗೊಳಿಸಿ ಸ್ಕೂಟರ್ ಸವಾರ ರಸ್ತೆಗೆ ಬಿದ್ದಿರುವ ಸ್ಥಳವನ್ನು ತೋರಿಸಿ ಆರೋಪಿಯ ಅತೀ ವೇಗ ಚಾಲನೆಯಿಂದ ಸದ್ರಿ ಗಾಡಿಗೆ ಡಿಕ್ಕಿಪಡಿಸಿದ್ದು, ಪಾಂಡು ರಂಗ ಭಟ್ ರವರು ತೀವ್ರವಾಗಿ ಗಾಯಗೊಂಡು ಅನಂತರ ಮೃತಪಟ್ಟಿರುವ ಬಗ್ಗೆ ತಿಳಿಸಿ ಪಂಚನಾಮೆಯನ್ನು 1-00 ರಿಂದ 1-45ರವರೆಗೂ ಜರುಗಿಸಿ ನಕ್ಷೆ ತಯಾರಿಸಿ ಪೋಟೋ ತೆಗೆದು ಸದ್ರಿ ವಾಹನಗಳನ್ನು ವಶಕ್ಕೆ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ಮೇಲೆ ಹೇಳಿದ ಕ್ರಮವನ್ನು ನನ್ನ ಸಮಕ್ಷಮ ಜರುಗಿಸಿದ್ದರೂ ಆರೋಪಿ ನನ್ನ ಪರಿಚಯಸ್ಥರಾದ ಕಾರಣ ಆತನಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ವಾಟೀ ಸವಾಲುಃ ಆರೋಪಿತರ ಪರ ವಕೀಲರು ವಾಟೀ ಸವಾಲು ಇಲ್ಲ ಎಂದು ನುಡಿದಿರುತ್ತಾರೆ.**

**ಮರು ವಿಚಾರಣೆಃ** ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ. ದ. ನ್ಯಾ. ದಂ. ಕುಂದಾಪುರ**